ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಕೊಡಗು ಜಿಲ್ಲೆಯಲ್ಲಿ ಪ್ರವಾಹದಿಂದಾಗಿ ಮನೆ ಕಳೆದುಕೊಂಡವರಿಗೆ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸುವ ಕುರಿತು

ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು) :-

239 (276) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕೊಡಗು ಜಿಲ್ಲೆಯಲ್ಲಿ ಕಳೆದ ವರ್ಷ ಸುರಿದ ಭೀಕರ ಮಳೆಯಿಂದ ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕರಡಿಗೋಡು, ಗುಹ್ಯ ಹಾಗೂ ನೆಲ್ಯಹುದಿಕೇರಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಬೆಟ್ಟದಕಾಡು ಕೊಂಡಂಗೇರಿ, ತೋರಾ ಗ್ರಾಮಗಳಲ್ಲಿ ಮನೆಗಳು ಸಂಪೂರ್ಣವಾಗಿ ನಾಶವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಈ ಸಂತ್ರಸ್ತರಿಗೆ ಬದಲಿ ನಿವೇಶನ ಹಾಗೂ ಶಾಶ್ವತ ವಸತಿ ವ್ಯವಸ್ಥೆ ಕಲ್ಪಿಸಲಾಗಿದೆಯೇ;

(ಇ) ಇದುವರೆಗೆ ನಿವೇಶನ ನೀಡಲಾಗದಿದ್ದ ಪಕ್ಷದಲ್ಲಿ ಬದಲಿ ನಿವೇಶನ ಕಲ್ಪಿಸುವ ಸಲುವಾಗಿ ಜಾಗಗಳನ್ನು ಗುರ್ತಿಸಲಾಗಿದೆಯೇ? (ಸಂಪೂರ್ಣ ವಿವರ ನೀಡುವುದು)